ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಅಂಗನವಾಡಿಗಳಿಗೆ ಪೂರೈಸುತ್ತಿರುವ ಆಹಾರ ತೀರಾ ಕಳಪೆ ಮಟ್ಟದಲ್ಲಿರುವ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

905 (909) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಪೂರೈಸುತ್ತಿರುವ ಆಹಾರ ತೀರಾ ಕಳಪೆ ಮಟ್ಟದಾಗಿರುವುದಲ್ಲದೆ, ನಿಗದಿತ ಸಮಯದಲ್ಲಿ ಪೂರೈಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ಆಹಾರ ಕಳಪೆ ಮಟ್ಟದ್ದಾಗಿರಲು ಮತ್ತು ನಿಗದಿತ ಸಮಯದಲ್ಲಿ ಪೂರೈಸದಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿರುವ ಅಂಗನವಾಡಿಗಳಿಗೆ ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರ ವಿವರಗಳನ್ನು ತಾಲ್ಲೂಕುವಾರು ನೀಡುವುದು ;

(ಈ) ಆಹಾರವನ್ನು ಪೂರೈಸುತ್ತಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರು ಆಹಾರ ಖರೀದಿಸುತ್ತಿರುವ ಆಹಾರ ಸಾಮಾಗ್ರಿಗಳ ಬೆಲೆಗೂ ಹಾಗೂ ಅಂದಿನ ಎ.ಪಿ.ಎಮ್.ಸಿ. ಮಾರುಕಟ್ಟೆ ಬೆಲೆಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಮಾರುಕಟ್ಟೆ ಬೆಲೆಗಿಂತ ಕಡಿಮೆ ದರದಲ್ಲಿ ಕಳಪೆ ಆಹಾರ ಸಾಮಾಗ್ರಿಗಳನ್ನು ಖರೀದಿಸಿ ಪೂರೈಸುತ್ತಿರುವುದರ ಬಗ್ಗೆ ಸಂಬಂಧಿಸಿದ ತಾಲ್ಲೂಕು ಅಧಿಕಾರಿ ಸರ್ಕಾರದ ಗಮನಕ್ಕೆ ತರದೇ ಇರುವುದರಿಂದ ಅವರ ಮೇಲೆ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)